# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 14 |
| **ಸದಸ್ಯರ ಹೆಸರು** | ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | 10.07.2018 |
| **ಉತ್ತರಿಸುವವರು** | ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿಗಾಗಿ ಹೊರಗುತ್ತಿಗೆಯಿಂದ ನೇಮಕ ಮಾಡಲಾದ ನೌಕರರ ಸಂಖ್ಯೆ ಎಷ್ಟು; ಯಾವ ಯಾವ ಹುದ್ದೆಗಳನ್ನು ಹೊರಗುತ್ತಿಗೆಯಿಂದ ತೆಗೆದುಕೊಳ್ಳಲಾಗಿದೆ; | ರಾಜ್ಯದ 270 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಪೌರಕಾರ್ಮಿಕರು, ಲೋಡರ್ಸ್, ಡ್ರೈವರ್ಸ್, ಕ್ಲೀನರ್ ಗಳನ್ನು ಹೊರತುಪಡಿಸಿ, 15047 ಸಂಖ್ಯೆ ಪೌರಕಾರ್ಮಿಕರು, 1288 ವಾಹನ ಚಾಲಕರು, 1835 ಸಹಾಯಕರು ಹಾಗೂ 400 ಸಂಖ್ಯೆ ಲೋಡರ್‌ಗಳಿಂದ ಸ್ವಚ್ಛತಾ ಕೆಲಸಗಳನ್ನು ಹೊರಗುತ್ತಿಗೆ ಮೂಲಕ ನಿರ್ವಹಿಸಲಾಗುತ್ತಿದೆ.<br><br>ಘನತ್ಯಾಜ್ಯವಸ್ತು ನಿರ್ವಹಣೆಗೆ ಸಂಬಂಧಿಸಿದಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಸ್ವಚ್ಛತಾ ಕೆಲಸಗಾರರಿಂದ ನಿರ್ವಹಿಸಬಹುದಾದಂತಹ ಕೆಲಸಗಳನ್ನು ಹೊರತುಪಡಿಸಿ, ಇನ್ನುಳಿದ ಕೆಲಸಗಳನ್ನು ಪೌರಕಾರ್ಮಿಕರು (ಗುತ್ತಿಗೆ/ನೇರಪಾವತಿ), ವಾಹನ ಚಾಲಕರು, ಸಹಾಯಕರು, ಲೋಡರ್ಸ್, ಮೇಲ್ವಿಚಾರಕರಿಂದ ಎಸ್.ಡಬ್ಲ್ಯೂ.ಎಂ.ನಿಯಮ ಹಾಗೂ ನಾರ್ಮೆಟಿವ್ ಸ್ಟಾಂಡರ್ಡ್‌ಗಳ ಅನುಸಾರ ಅವಶ್ಯಕತೆಗನುಗುಣವಾಗಿ ಹೊರಗುತ್ತಿಗೆ ಮೂಲಕ ನಿರ್ವಹಿಸಲು ಕ್ರಮವಹಿಸಲಾಗುತ್ತಿದೆ. |
| (ಆ) | ಪೌರಾಡಳಿತ ಇಲಾಖೆಯಿಂದ 2017ನೇ ಡಿಸೆಂಬರ್ ಮಾಹೆಯಲ್ಲಿ ಜಾರಿಗೊಳಿಸಲಾದ ಆದೇಶದಂತೆ ಪ್ರತಿ 700 ಜನಸಂಖ್ಯೆಗೆ ಒಬ್ಬರಂತೆ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಮಾತ್ರ ಅವಕಾಶ ಎಂದು ತಿಳಿಸಿದ್ದು, ಇದರಿಂದ ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿಗೆ ಆಗುವ ಸಮಸ್ಯೆಯನ್ನು ಸರ್ಕಾರ ಮನಗಂಡಿದೆಯೇ; (ವಿವರ ನೀಡುವುದು) | 2010 ರ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಪ್ರತಿ 1000 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರಂತೆ ನಿರ್ಧರಿಸಿಕೊಂಡು ಸ್ವಚ್ಛತಾ ಕೆಲಸಗಳನ್ನು ನಿರ್ವಹಿಸಲಾಗುತ್ತಿತ್ತು. ಆದರೆ SWM Rules2016 ಹಾಗೂ ಸ್ವಚ್ಛ ಭಾರತ ಮಿಷನ್ ಮಾರ್ಗಸೂಚಿಗಳ ಅನ್ವಯ ನಗರ ಸ್ಥಳೀಯ ಸಂಸ್ಥೆಗಳು ಘನ ತ್ಯಾಜ್ಯ ವಸ್ತು ನಿರ್ವಹಣೆ ಮಾಡಬೇಕಿದ್ದಲ್ಲಿ ಹಿಂದಿನ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಪೌರಕಾರ್ಮಿಕರ ಸಂಖ್ಯೆ ಕಡಿಮೆಯಾಗುವುದನ್ನು ಮನಗಂಡು 2017 ನೇ ಸಾಲಿನ ಸರ್ಕಾರದ ಆದೇಶದ ರೀತ್ಯ ಪ್ರತಿ 700 ಜನಸಂಖ್ಯೆಗೆ ಒಬ್ಬ ಪೌರಕಾರ್ಮಿಕರಂತೆ(ಲೋಡರ್ಸ್, ವಾಹನ ಚಾಲಕರು, ವಾಚ್‌ಮೆನ್, ಪ್ಲಾಂಟ್ ಆಪರೇಟರ್‌ಗಳು, ಹೆಲ್ಪರ್ಸ್ ಹಾಗು ಸೂಪ್ಪೆರ್ ವೈಸರ್‌ಗಳನ್ನು ಹೊರತುಪಡಿಸಿ) ಪರಿಗಣಿಸಲಾಗುತ್ತಿದೆ. ಹಿಂದಿನ ಸಾಲುಗಳಿಗಿಂತಲು ಹಾಲಿ ಮಂಜೂರಾಗಿರುವ ಪೌರಕಾರ್ಮಿಕರ ಸಂಖ್ಯೆ ಹೆಚ್ಚಾಗಿರುವುದರಿಂದ ನಗರ/ಪಟ್ಟಣಗಳ ಸ್ವಚ್ಛತೆಗೆ ಧಕ್ಕೆ ಆಗುವ ಸಂಭವ ಉದ್ಭವಿಸುವುದಿಲ್ಲ. |

| | | |
|---|---|---|
| (ಇ) | ಈ ಆದೇಶ ಜಾರಿಗೆ ಬಂದಲ್ಲಿ ಪ್ರಸ್ತುತ ಹೊರಗುತ್ತಿಗೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ಹುದ್ದೆ ಕಳೆದುಕೊಂಡು ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿ ಸಮಸ್ಯೆ ಹೆಚ್ಚಾಗಲಿದ್ದು, ಸರ್ಕಾರ ಈ ವಿಚಾರದಲ್ಲಿ ಯಾವ ಕ್ರಮ ವಹಿಸಿದೆ? (ಮಾಹಿತಿ ನೀಡುವುದು) | ಪ್ರಸ್ತುತ ಆದೇಶ ಜಾರಿಗೆ ಬಂದ ನಂತರ ಖಾಲಿ ಇರುವ ನೇರ ನೇಮಕಾತಿ ಹುದ್ದೆಗಳನ್ನು ಕರ್ನಾಟಕ ಪುರಸಭೆ (ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳ ಪೌರಕಾರ್ಮಿಕರ ನೇಮಕಾತಿ) (ವಿಶೇಷ) ನಿಯಮಗಳು 2017ರ ನಿಯಮಗಳ ರೀತ್ಯ ಖಾಯಂ ನೇಮಕಾತಿ ಮಾಡಿಕೊಳ್ಳಲಾಗುವುದು. ಉಳಿಕೆ ಮಂಜೂರಾದ ಹುದ್ದೆಗಳಿಗನುಸಾರ ಇರುವ ಹೊರಗುತ್ತಿಗೆ ನೌಕರರಿಗೆ ನಗರ ಸ್ಥಳೀಯ ಸಂಸ್ಥೆಗಳಿಂದ ನೇರ ವೇತನ ಪಾವತಿಗೆ ಕ್ರಮ ವಹಿಸಲಾಗುತ್ತಿರುವುದರಿಂದ ಘನ ತ್ಯಾಜ್ಯ ವಿಲೇವಾರಿ ಸಮಸ್ಯೆ ಹೆಚ್ಚಾಗುವ ಸಂಭವವಿರುವುದಿಲ್ಲ. |

ಸಂಖ್ಯೆ: ನಅಇ 151 ಜಿಇಎಲ್ 2018

**(ರಮೇಶ್ ಲ. ಜಾರಕೀಹೊಳಿ)**
ಪೌರಾಡಳಿತ, ಸ್ಥಳೀಯ ಸಂಸ್ಥೆಗಳು,
ಹಾಗೂ ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು